ದಿನಾಂಕ 09 06 2006ರ ತೀರ್ಪಿನಲ್ಲಿ ಈಗಿನ ನ್ಯಾಯಾಧಿಕರಣವು ಆಂಧ್ರಪ್ರದೇಶವು ಬಳಸಲು ಉದ್ದೇಶಿಸಿರುವ ಹೆಚ್ಚುವರಿ ನೀರು ಸಹ ಕಣಿವೆ ರಾಜ್ಯಗಳ ಪಾಲನ್ನು ನಿರ್ಧರಿಸಲು ಪರಿಗಣಿಸಲಾಗುವುದೆಂದು ತಿಳಿಸಿದೆ ನ್ಯಾಯಾಧಿಕರಣದ ಮುಂದೆ ನಡವಳಿಗಳು ದೀರ್ಘಕಾಲ ನಡೆದಲ್ಲಿ ಅರ್ಜಿದಾರರು ಯೋಜನೆಗಳನ್ನು ನಿರ್ಮಿಸಲು ಅರ್ಜಿ ಸಲ್ಲಿಸಿದಲ್ಲಿ ನ್ಯಾಯಾಧಿಕರಣವು ಅಂತಹ ಮನವಿಯನ್ನು ಪರಿಗಣಿಸಲಾಗುವುದೆಂದು ಸಹ ತಿಳಿಸಿದೆ ಈ ಹಿನ್ನೆಲೆಯಲ್ಲಿ ಸ್ಕೀಂ ಬಿ ಅಡಿಯಲ್ಲಿ ಹೆಚ್ಚುವರಿ ನೀರನ್ನು ಉಪಯೋಗಿಸಲು ಯೋಜನೆಗಳನ್ನು ರಾಜ್ಯವು ಕೈಗೆತ್ತಿಕೊಳ್ಳುವ ಬಗ್ಗೆ ಕೃಷ್ಣಾ ಜಲ ವಿವಾದ ನ್ಯಾಯಾಧಿಕರಣದ ಅನುಮತಿ ಕೋರಿ ಅರ್ಜಿ ಸಲ್ಲಿಸಲು ರಾಜ್ಯದ ನ್ಯಾಯವಾದಿಗಳೊಡನೆ ಚರ್ಚಿಸಿ, ಮುಂದಿನ ಕ್ರಮದ ಬಗ್ಗೆ ಪರಿಶೀಲಿಸಲಾಗುವುದು

1365 (1452) ಶ್ರೀ ಪ್ರಭಾಕರ ಬಂಗೇರ ಕೆ (ಬೆಳ್ತಂಗಡಿ) – ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗಣಕೀಕೃತ ಪಹಣಿ ಪತ್ರಿಕೆಯ ಪ್ರತಿಯನ್ನು ಪಡೆಯಲು ಸರ್ಕಾರವು ನಿಗದಿಪಡಿಸಿರುವ ರೂ 15 00 ಶುಲ್ಕವನ್ನು ಕಡಿಮೆಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ,

ಆ) ಹಾಗಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಳ್ಳುವ ಕ್ರಮಗಳೇನು,

ಇ) ಪ್ರಸ್ತುತ ಪಹಣಿ ಪತ್ರಿಕೆಯನ್ನು ಪಡೆಯಲು ಗ್ರಾಮಾಂತರದ ಜನರು ತಾಲ್ಲೂಕು ಕೇಂದ್ರಕ್ಕೆ ಬರುವುದನ್ನು ಬದಲಾವಣೆಗೊಳಿಸಿ ಹೋಬಳಿ ಮತ್ತು ಪಂಚಾಯತ್ ಮಟ್ಟದಲ್ಲೇ ವಿತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)

ಅ) ಅಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ

ಆ) ಉದ್ಭವಿಸುವುದಿಲ್ಲ

ಇ) "ನೆಮ್ಮದಿ" ಯೋಜನೆಯಡಿ ಪ್ರಾರಂಭಿಸಲಾಗಿರುವ ಹೋಬಳಿ ಮಟ್ಟದ ಟಿಲಿಸೆಂಟರ್‌ಗಳಲ್ಲಿ ಪಹಣಿಗಳನ್ನು ವಿತರಿಸಲಾಗುತ್ತಿದೆ ಇಂದಿನವರೆಗೆ, 710 ನೆಮ್ಮದಿ ಟಿಲಿಸೆಂಟರ್‌ಗಳನ್ನು ಹೋಬಳಿ ಮಟ್ಟದಲ್ಲಿ ಕಾರ್ಯಾಚರಣೆಗೊಳಿಸಲಾಗಿದೆ